ಮಂಡಿಸುವ ಬಗ್ಗೆ ಆದಷ್ಟು ಬೇಗ ಈ ಸರ್ಕಾರ ಒಂದು ನಿರ್ಣಯವನ್ನು ಕೈಗೊಳ್ಳುತ್ತದೆಂಬ ಮಾತನ್ನು ತಮ್ಮ ಗಮನಕ್ಕೆ ತೆಗೆದುಕೊಂಡು ಬರುತ್ತಿದ್ದೇನೆ.

ಆ) ವಿಷಯ: ಪರೀಕ್ಷಾ ಸಮಯವಿರುವುದರಿಂದ ಸಂಜೆ ಆರೂವರೆ ಗಂಟೆಯಿಂದ ರಾತ್ರಿ ಹನ್ನೊಂದು ಗಂಟೆವರೆಗೆ ವಿದ್ಯುತ್ ಕಡಿತಗೊಳಿಸದಿರುವಂತೆ ಕ್ರಮ ಕೈಗೊಳ್ಳುವುದು.

ಶ್ರೀ ಆರ್.ಧ್ರುವನಾರಾಯಣ(ಸಂತೇಮರಹಳ್ಳಿ): ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯದ ಗ್ರಾಮಾಂತರ ಪ್ರದೇಶದಲ್ಲಿ ನಿರಂತರವಾಗಿ ವಿದ್ಯುತ್ ಕಡಿತವುಂಟಾಗುತ್ತಿದೆ. ತಮಗೆ ಗೊತ್ತಿರುವಂತೆ, ಈಗ SSLC ಪರೀಕ್ಷೆ ನಡೆಯುತ್ತಿದೆ. ವಿದ್ಯಾರ್ಥಿಗಳಿಗೆ ಇದು ಪರೀಕ್ಷಾ ಸಮಯ. ಸಾಯಂಕಾಲದ ವೇಳೆ ಸುಮಾರು 6 ರಿಂದ ರಾತ್ರಿ 11 ಗಂಟೆವರೆಗೂ ಬಹಳಷ್ಟು ಸಲ ವಿದ್ಯುತ್ ಕಡಿತವುಂಟಾಗುತ್ತಿದೆ. ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳಿಗೆ ಪರೀಕ್ಷೆ ಇರುವ ಈ ಸಮಯದಲ್ಲಿ ತಾವು ದಯವಿಟ್ಟು ನಿರಂತರವಾಗಿ ವಿದ್ಯುತ್ ಕೊಡಬೇಕು. ಏಕೆಂದರೆ, ತಮಗೆ ಗೊತ್ತಿದೆ. BPL ಪಟ್ಟಿಯಲ್ಲಿ ಕೂಡ ಬಡವರಿಗೆ ಇವತ್ತು ಸರಿಯಾದ ರೀತಿಯಲ್ಲಿ ಕಾರ್ಡುಗಳನ್ನು ಕೊಟ್ಟಿಲ್ಲ. ಸೀಮೆಎಣ್ಣೆಯೂ ಸಮರ್ಪಕವಾಗಿ ವಿತರಣೆಯಾಗಿಲ್ಲ. ಈ ದಿಸೆಯಲ್ಲಿ ಗ್ರಾಮಾಂತರ ಪ್ರದೇಶಗಳಲ್ಲಿ ರಾತ್ರಿ ವೇಳೆ ಕತ್ತಲಿನಲ್ಲಿ ಓದುವುದಕ್ಕಾಗುವುದಿಲ್ಲ. ಇದರಿಂದಾಗಿ ವಿದ್ಯಾರ್ಥಿಗಳಿಗೆ ಬಹಳಷ್ಟು ಸಮಸ್ಯೆಯಾಗಿದೆ. ದಯಮಾಡಿ ಈ ವಿದ್ಯುತ್ ಕಡಿತವನ್ನು ತೆಗೆಯಬೇಕು. ಪರೀಕ್ಷಾ ಸಮಯವಾಗಿರುವುದರಿಂದ ಸಾಯಂಕಾಲದ ಸಮಯದಲ್ಲಿ ಆರೂವರೆ ಗಂಟೆಯಿಂದ ರಾತ್ರಿ ಹನ್ನೊಂದು ಗಂಟೆವರೆಗೂ ನಿರಂತರವಾಗಿ ವಿದ್ಯುತ್ ಒದಗಿಸತಕ್ಕಂಥ ಜವಾಬ್ದಾರಿಯನ್ನು ತಾವು ಹೊತ್ತುಕೊಳ್ಳಬೇಕೆಂದು ಅಧ್ಯಕ್ಷರ ಮುಖಾಂತರ ತಮ್ಮಲ್ಲಿ ನಾನು ಮನವಿ ಮಾಡಿಕೊಳ್ಳುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್(ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಏನು ವಿಷಯ ಪ್ರಸ್ತಾಪ ಮಾಡಿದ್ದಾರೆ, ಅದರಲ್ಲಿ ಏಪ್ರಿಲ್ ತಿಂಗಳಿನಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸುತ್ತಿರುವ ಸಂದರ್ಭದಲ್ಲಿ ವಿದ್ಯುತ್ ಕಡಿತವಾಗುವುದರಿಂದ ಅವರುಗಳಿಗೆ ತೊಂದರೆಯಾಗುತ್ತದೆಂಬ ಭಾವನೆಗಳನ್ನು ಅವರು ವ್ಯಕ್ತಪಡಿಸಿದ್ದಾರೆ. ಇವತ್ತು ವಿದ್ಯುತ್ ಮಂತ್ರಿಗಳ ಜೊತೆ ಮಾತನಾಡಿ, ಪರೀಕ್ಷಾ ಸಮಯದಲ್ಲಿ ವಿದ್ಯಾರ್ಥಿಗಳಿಗೆ ತೊಂದರೆಯಾಗದ ರೀತಿಯಲ್ಲಿ ವ್ಯವಸ್ಥೆ ಮಾಡುವ ಬಗ್ಗೆ ಸರ್ಕಾರ ಸರಿಯಾದ ಕ್ರಮ ಕೈಗೊಳ್ಳುತ್ತದೆಂದು ತಮ್ಮ ಗಮನಕ್ಕೆ ತರಬಯಸುತ್ತೇನೆ.